**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಟಿ.ಎನ್ ಜವರಾಯಿಗೌಡ ಇವರು ನಿಯಮ 72 ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆ ಸಂಖ್ಯೆ:109 ಕ್ಕೆ ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖಾ ಸಚಿವರ ಉತ್ತರ.**

**ಸೂಚನೆ:**

ಮಾನದಂಡಗಳನ್ನು ಉಲ್ಲಂಘಿಸಿ ಅನರ್ಹರು ಪಡೆದಿದ್ದ 2 ಲಕ್ಷಕ್ಕೂ ಅಧಿಕ ಬಿ.ಪಿ.ಎಲ್. ಕಾರ್ಡ್‌ಗಳನ್ನು ರದ್ದುಪಡಿಸಲಾಗಿದ್ದು, ಸುಮಾರು 4.80 ಲಕ್ಷಕ್ಕೂ ಅಧಿಕ ಸದಸ್ಯರ ಹೆಸರುಗಳನ್ನು ಡಿಲೀಟ್ ಮಾಡಲಾಗಿದೆ ಎಂದು ರಾಜ್ಯದ ಪ್ರಮುಖ ಪತ್ರಿಕೆಯಾದ ವಿಜಯ ಕರ್ನಾಟಕದಲ್ಲಿ ವರದಿಯಾಗಿದೆ. ರಾಜ್ಯದೊಳಗೆ ಹೆಚ್ಚಿನ ಸಂಖ್ಯೆಯಲ್ಲಿ ಹೊರ ರಾಜ್ಯದವರು ವಾಸಿಸುತ್ತಿದ್ದಾರೆ. ಅಂತಹವರ ಪೈಕಿ 57,864 ಮಂದಿ ನಕಲಿ ಬಿ.ಪಿ.ಎಲ್ ಕಾರ್ಡ್ ಮಾಡಿಸಿಕೊಂಡಿದ್ದಾರೆ. ಇ-ಕೆವೈಸಿ ಮಾಡಿಸದವರು 6,16,196 ಇದ್ದಾರೆ. 1.20 ಲಕ್ಷ ರೂ ಕಿಂತ ಅಧಿಕ ಆದಾಯವುಳ್ಳವರು 5,13,613 ಜನರಿದ್ದಾರೆ. 7 ಎಕರೆಗಿಂತಲೂ ಹೆಚ್ಚು ಭೂಮಿ ಹೊಂದಿದವರು 33,456 ಜನರಿದ್ದಾರೆ. ಕಂಪನಿಗಳಲ್ಲಿ ಡೈರೆಕ್ಟರ್ ಆಗಿರುವವರು 19.690 ಮಂದಿ ಇದ್ದಾರೆ. 25 ಲಕ್ಷ ರೂ ವಹಿವಾಟು ಹೊಂದಿದವರು 2,684 ಜನರಿದ್ದಾರೆ. ಹಾಗೂ ಮೃತಪಟ್ಟ ಸದಸ್ಯರು ಸುಮಾರು 1,446 ಮಂದಿಗೆ ಬಿ.ಪಿ.ಎಲ್. ಕಾರ್ಡ್‌ಗಳನ್ನು ವಿತರಿಸಲಾಗಿದೆ. ಇಂತಹವರೆಲ್ಲರೂ ಗೊತ್ತಿದ್ದೂ ರೇಷನ್ ಪಡೆದಿರುವ ಇವರಿಗೆ ದಂಡ ವಿಧಿಸುವುದರ ಜೊತೆಗೆ ಕಠಿಣ ಶಿಕ್ಷೆಯಾಗಬೇಕು. ಬಡವರಿಗಾಗಿ ಇರುವ ಬಿ.ಪಿ.ಎಲ್.ಕಾರ್ಡ್ ಪಡೆಯುವುದು ಕಾನೂನಿಗೆ ವಿರುದ್ಧವಾಗಿರುತ್ತದೆ, ಇಷ್ಟೆಲ್ಲಾ ಕಾರ್ಡುಗಳನ್ನು ಅಧಿಕಾರಿಗಳ/ಸಿಬ್ಬಂದಿ ವರ್ಗದವರ ಚಿತಾವಣೆ ಇಲ್ಲದೆ ಹೇಗೆ ಕೊಡಲು ಸಾಧ್ಯ? ಈ ಬಗ್ಗೆ ಸರ್ಕಾರ ಇಲ್ಲಿಯ ತನಕ ಏನು ಮಾಡುತ್ತಿತ್ತು. ಈ ರೀತಿಯಾಗಿ ಅನರ್ಹರಿಗೆ ಬಿ.ಪಿ.ಎಲ್.ಕಾರ್ಡ್ ಗಳನ್ನು ವಿತರಿಸಿರುವ ಅಧಿಕಾರಿ/ನೌಕರರ ಮೇಲೆ ಸರ್ಕಾರ ಇಲ್ಲಿಯ ತನಕ ಏನು ಕ್ರಮ ಕೈಗೊಂಡಿದೆ. ಈ ದಂದೆಯಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರನ್ನು ಅಮಾನತ್ತು ಮಾಡುವುದರ ಬದಲು ಸರ್ಕಾರಿ ಕೆಲಸದಿಂದಲೇ ವಜಾಗೊಳಿಸುವ ಕಠಿಣ ರೀತಿಯ ಕಾನೂನನ್ನು ತರಬೇಕು ಎಂದು ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರ ಗಮನ ಸೆಳೆಯುತ್ತೇನೆ.

**ಉತ್ತರ:**

ಕೇಂದ್ರ ಸರ್ಕಾರದಿಂದ ರಾಜ್ಯದಲ್ಲಿ ಈ ಕೆಳಕಂಡ ವಿಧಗಳಲ್ಲಿ 7,76,206 ಶಂಕಾಸ್ಪದ ಪಡಿತರ ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ.

1. CBDT Income Group Annual Income > 1,20,000
2. GSTN Gross Turnover >25 Lacs
3. MCA Individual as Director
4. PDS Duplicate RC Inter State
5. PDS Duplicate RC Intra State
6. PDS RC Member Above 100 Years
7. PDS Silent RC >12 Months

8. PDS Silent RC 6-12 Months
9. PDS Single Member Below 18 Years
10. PM KISAN Land Holding >7.5 Acres
11. UIDAI Aadhaar Status Deceased
12. Vehicle Ownership value Owning LIGHT MOTOR VEHICLE
13. Vehicle Ownership value Owning MEDIUM MOTOR VEHICLE
14. Vehicle Ownership value Owning OTHER THAN MENTIONED ABOVE

ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.

1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.
2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.
3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರ್ಯಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.
4. ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.

ಸದರಿ ಮಾನದಂಡಗಳ ಆಧಾರದ ಮೇಲೆ ಅನರ್ಹವೆಂದು ಕಂಡುಬಂದ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗುತ್ತಿದೆ.

ರಾಜ್ಯದಲ್ಲಿರುವ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ಸದರಿ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸಲು ಹಾಗೂ ಈ ರೀತಿ ಪರಿವರ್ತಿಸಿದ ಪ್ರಮಾಣಕ್ಕೆ ಅನುಗುಣವಾಗಿ ಅಷ್ಟೇ ಪ್ರಮಾಣದ ಆದ್ಯತಾ ಪಡಿತರ ಚೀಟಿಗಳನ್ನು (PHH) ಬಡತನ ರೇಖೆಗಿಂದ ಕೆಳಗಿರುವ ಅರ್ಹ ನಾಗರಿಕರಿಗೆ ವಿತರಿಸಲು ಈ ಕೆಳಕಂಡಂತೆ ಕ್ರಮ ವಹಿಸಲು ಸರ್ಕಾರದ ಆದೇಶ ಸಂಖ್ಯೆ: ಇ-ಆನಾಸ 159 ಡಿಆರ್ ಎ2025 (1799618) ದಿನಾಂಕ: 30.10.2025 ರಲ್ಲಿ ಆದೇಶಿಸಿದೆ.

1. ಆದ್ಯತಾ ಪಡಿತರ ಚೀಟಿಗಳನ್ನು (PHH) ಹೊಂದಿರುವ ಅನರ್ಹ ಫಲಾನುಭವಿಗಳನ್ನು ಪತ್ತೆ ಹಚ್ಚಿ ಸದರಿಯವರು ಹೊಂದಿರುವ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸತಕ್ಕದ್ದು.

2. ತಾತ್ಕಾಲಿಕವಾಗಿ ಆದ್ಯತೇತರ ಪಡಿತರ ಚೀಟಿಯನ್ನಾಗಿ (NPHH)ಪರಿವರ್ತಿಸಲಾದ ಪಡಿತರದಾರರು ಆದ್ಯತಾ ಪಡಿತರ ಚೀಟಿ ಹೊಂದಲು (PHH) ಅರ್ಹರಾಗಿದ್ದಲ್ಲಿ 45 ದಿನಗಳೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರರಿಗೆ ಮನವಿ ಸಲ್ಲಿಸಿದಲ್ಲಿ ಸದರಿ ಮನವಿಯನ್ನು ಪರಿಶೀಲಿಸಿ ಆದ್ಯತಾ ಪಡಿತರ ಚೀಟಿ ಹೊಂದಲು ನಿಯಮಾನುಸಾರ ಅರ್ಹರಿದ್ದಲ್ಲಿ ಅಂತಹವರ ಆದ್ಯತಾ ಪಡಿತರ ಚೀಟಿಯನ್ನು (PHH) ಮರುಸ್ಥಾಪಿಸತಕ್ಕದ್ದು.

3. ಅನರ್ಹರು ಹೊಂದಿರುವ ಆದ್ಯತಾ ಪಡಿತರ ಚೀಟಿಗಳನ್ನು (PHH) ಆದ್ಯತೇತರ ಪಡಿ ಚೀಟಿಗಳನ್ನಾಗಿ (NPHH)ಪರಿವರ್ತಿಸಿದ ನಂತರ ಯಾವುದೇ ಆಕ್ಷೇಪಣೆ ಸ್ವೀಕೃತವಾಗಿ ಇದ್ದಲ್ಲಿ ಅಂತಹ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳಾಗಿ (NP' ಮುಂದುವರೆಸತಕ್ಕದ್ದು.

4. ಆದ್ಯತಾ ಪಡಿತರ ಚೀಟಿಗಳನ್ನು ಹೊಂದಿರುವ ಅನರ್ಹರನ್ನು ಪತ್ತೆ ಹಚ್ಚಿ ಅವುಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಮಾರ್ಪಡಿಸಿದ ನಂತರ ಅಷ್ಟೇ ಸಂಖ್ಯೆಯ ಆದ್ಯತಾ ಪಡಿತರ ಚೀಟಿಗಳನ್ನು (PHH) ಹೊಸದಾಗಿ ಅರ್ಹ ಫಲಾನುಭವಿಗಳಿಗೆ ನೀಡಲು ಕ್ರಮವಹಿಸತಕ್ಕದ್ದು.

ಈ ರೀತಿ ತಾತ್ಕಾಲಿಕವಾಗಿ ಆದ್ಯತೇತರ ಪಡಿತರ ಚೀಟಿಯನ್ನಾಗಿ (NPHH) ಪರಿವರ್ತಿಸಲಾದ ಪಡಿತರ ಚೀಟಿದಾರರು ಆದ್ಯತಾ ಪಡಿತರ ಚೀಟಿ ಹೊಂದಲು (PHH) ಅರ್ಹರಾಗಿದ್ದಲ್ಲಿ 45 ದಿನದೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದಲ್ಲಿ ಸದರಿ ಮನವಿಯನ್ನು ಪರಿಶೀಲಿಸಿ ಆದ್ಯತಾ ಪಡಿತರ ಚೀಟಿ ಹೊಂದಲು ನಿಯಮಾನುಸಾರ ಅರ್ಹರಿದ್ದಲ್ಲಿ ಅಂತಹವರ ಆದ್ಯತಾ ಪಡಿತರ ಚೀಟಿಯನ್ನು (PHH) ಮರುಸ್ಥಾಪಿಸಲು ಕ್ರಮವಹಿಸಲಾಗುತ್ತದೆ. ಅದರಂತೆ ಒಂದು ವೇಳೆ ಅರ್ಹ ಫಲಾನುಭವಿಯ ಆದ್ಯತಾ ಪಡಿತರ ಚೀಟಿಯನ್ನು ರದ್ದುಪಡಿಸಿದಲ್ಲಿ, ಸಂಬಂಧಪಟ್ಟ ತಹಶೀಲ್ದಾರ್‌ಗೆ ಮನವಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಏಪ್ರಿಲ್ 2025 ರಿಂದ ನವೆಂಬರ್ 2025 ರ ವರೆಗೆ ಅನರ್ಹ ಪಡಿತರ ಚೀಟಿದಾರರಿಂದ ಒಟ್ಟು ರೂ. 25,64,211.00 ದಂಡವನ್ನು ಸರ್ಕಾರಕ್ಕೆ ಪಾವತಿಸಲಾಗಿರುತ್ತದೆ. ಅಲ್ಲದೇ ಅಧಿಕಾರಿ/ ನೌಕರರ ವಿರುದ್ಧ ದೂರು ಸಲ್ಲಿಕೆಯಾದಲ್ಲಿ ಅಂತಹ ಆಪಾದಿತರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

ಇ-ಆನಾಸ 349 ಡಿಆರ್ಎ 2025.

(ಕೆ.ಹೆಚ್ ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು